ಕರ್ನಾಟಕ ಸರಕಾರ

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು –575001.

Deputy Commissioner & District Magistrate's Office, Dakshina Kannada, Mangaluru-575001.

ಸಂಖ್ಯೆ ಎ.ಆರ್.ಎಮ್(1) 574/2020/ಇ-119566/ಸಿ3 ದಿನಾಂಕ: 02-12-2020

## ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ

| | |
|---|---|
| ವಿಷಯ | ಶಸ್ತ್ರಾಸ್ತ್ರ ಕಾಯ್ದೆ ಮತ್ತು ನಿಯಮ - ಗ್ರಾಮ ಪಂಚಾಯತ್ ಸಾರ್ವತ್ರಿಕ ಚುನಾವಣೆ-2020 -ಚುನಾವಣಾ ಅವಧಿಯಲ್ಲಿ ಶಸ್ತ್ರಾಸ್ತ್ರಗಳ ಬಳಕೆ ನಿರ್ಬಂಧ ಆದೇಶ. |
| ಉಲ್ಲೇಖ | 1. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ : ರಾಚುಆ:171:ಇಜಿಪಿ:2010 ದಿನಾಂಕ 30/11/2020.<br>2. ಚುನಾವಣಾ ಆಯೋಗದ ಸ್ಥಾಯಿ ಆದೇಶ ಸಂಖ್ಯೆ 464/96 ಎ.ಎಲ್.ಒ.ಪಿ.ಎಲ್.ಎನ್. ದಿನಾಂಕ 13/13/1996 |

**ಪ್ರಸ್ತಾವನೆ:**

ರಾಜ್ಯ ಚುನಾವಣಾ ಆಯೋಗವು ಪಂಚಾಯತ್ ರಾಜ್ ಕಾಯಿದೆ 1993 ಪ್ರಕರಣದನ್ವಯ ಗ್ರಾಮ ಪಂಚಾಯತ್ ಗಳಿಗೆ ಚುನಾವಣೆಯನ್ನು ಘೋಷಿಸಿದ್ದು ಚುನಾವಣೆ ಸಂದರ್ಭದಲ್ಲಿ ಮುಕ್ತ ಮತ್ತು ನ್ಯಾಯಯುತ ಹಾಗೂ ನಿಷ್ಪಕ್ಷಪಾತವಾಗಿ ಚುನಾವಣೆ ನಡೆಸುವುದನ್ನು ಖಾತರಿಪಡಿಸಲು ಚುನಾವಣಾ ಆಯೋಗವು ಹಲವಾರು ಮಾರ್ಗಸೂಚಿ ಮತ್ತು ಆದೇಶಗಳನ್ನು ಹೊರಡಿಸಿರುತ್ತದೆ. ಪರವಾನಿಗೆ ಪಡೆದು ಆಯುಧ ಹೊಂದಿರುವಂತಹ ಪರವಾನಿಗೆದಾರರ ಕುರಿತು ತೀವ್ರ ಪೂರ್ವಭಾವಿ ಪರಿಶೀಲನೆ ಮಾಡಿ ಚುನಾವಣೆಯ ಅವಧಿಯಲ್ಲಿ ಸಾರ್ವಜನಿಕ ಶಾಂತಿ, ಸುವ್ಯವಸ್ಥೆ ಮತ್ತು ಸಾರ್ವಜನಿಕ ಸುರಕ್ಷತೆ ಕಾಪಾಡುವ ದೃಷ್ಟಿಯಿಂದ ಅವಶ್ಯವೆಂದು ಶಸ್ತ್ರಾಸ್ತ್ರ ಪರವಾನಿಗೆದಾರರು ಅವರ ಪರವಾನಿಗೆಯಲ್ಲಿ ಹೊಂದಿರುವ ಶಸ್ತ್ರಾಸ್ತ್ರಗಳನ್ನು ಠೇವಣಿಯಲ್ಲಿ ಇರಿಸಲು ಕ್ರಮಕೈಗೊಳ್ಳಬೇಕಾಗಿದೆ.

ಜಿಲ್ಲೆಯ ಪ್ರಸಕ್ತ ಕಾನೂನು ಸುವ್ಯವಸ್ಥೆ ಸಾರ್ವಜನಿಕ ಶಾಂತಿ ಸುರಕ್ಷತೆಯ ಬಗ್ಗೆ ಪರಿಶೀಲನೆ ನಡೆಸಿ ಸಾರ್ವಜನಿಕ ಹಿತದೃಷ್ಟಿಯಿಂದ ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಪುದು ಗ್ರಾಮ ಪಂಚಾಯತ್ ಮತ್ತು ಬೆಳ್ತಂಗಡಿ ತಾಲೂಕಿನ ವೇಣೂರು ಮತ್ತು ಆರಂಬೋಡಿ ಗ್ರಾಮ ಪಂಚಾಯತ್ ವ್ಯಾಪ್ತಿಯನ್ನು ಹೊರತುಪಡಿಸಿ, ಉಳಿದಂತೆ ಎಲ್ಲಾ ಗ್ರಾಮ ಪಂಚಾಯತ್ ಗಳಿಗೊಳಪಟ್ಟ ಬೆಳೆ ರಕ್ಷಣೆಗಾಗಿ ಮತ್ತು ಆತ್ಮ ರಕ್ಷಣೆಗಾಗಿ ಶಸ್ತ್ರಾಸ್ತ್ರ ಪರವಾನಿಗೆ ಹೊಂದಿರುವ ಎಲ್ಲಾ ಪರವಾನಿಗೆದಾರರು ತಮ್ಮ ಪರವಾನಿಗೆಯಲ್ಲಿ ಹೊಂದಿರುವ ಎಲ್ಲಾ ಶಸ್ತ್ರಾಸ್ತ್ರಗಳನ್ನು ಚುನಾವಣಾ ಅವಧಿಯಲ್ಲಿ ಠೇವಣಿಯಲ್ಲಿರಿಸಲು ಆದೇಶಿಸುವುದು ಅವಶ್ಯವೆಂದು ಮನಗಂಡು **ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ಡಾ.ರಾಜೇಂದ್ರ ಕೆ.ವಿ. ಭಾ.ಆ. ಸೇ.,** ಆದ ನಾನು ಈ ಕೆಳಗಿನಂತೆ ಆದೇಶಿಸಿರುತ್ತೇನೆ.

## ಆದೇಶ

1. ಮಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯನ್ನು ಹೊರತುಪಡಿಸಿ, ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಪುದು ಗ್ರಾಮ ಪಂಚಾಯತ್ ಮತ್ತು ಬೆಳ್ತಂಗಡಿ ತಾಲೂಕಿನ ವೇಣೂರು ಮತ್ತು ಆರಂಬೋಡಿ ಗ್ರಾಮ ಪಂಚಾಯತ್ ವ್ಯಾಪ್ತಿಯನ್ನು ಹೊರತುಪಡಿಸಿ, ಉಳಿದಂತೆ ಎಲ್ಲಾ ಗ್ರಾಮ ಪಂಚಾಯತ್ ಗಳಿಗೊಳಪಟ್ಟ ಬೆಳೆ ರಕ್ಷಣೆಗಾಗಿ ಮತ್ತು ಆತ್ಮ ರಕ್ಷಣೆಗಾಗಿ ಶಸ್ತ್ರಾಸ್ತ್ರ ಪರವಾನಿಗೆ ಹೊಂದಿರುವ ಎಲ್ಲಾ ಪರವಾನಿಗೆದಾರರು ತಮ್ಮ ಪರವಾನಿಗೆಯಲ್ಲಿ ಹೊಂದಿರುವ ಎಲ್ಲಾ ಶಸ್ತ್ರಾಸ್ತ್ರಗಳನ್ನು ಈ ಕೆಳಗೆ ನಮೂದಿಸಿದ ದಿನಾಂಕದೊಳಗಾಗಿ ಭಾರತೀಯ ಶಸ್ತ್ರಾಸ್ತ್ರ ಕಾಯ್ದೆಯಡಿ ನಮೂನೆ ನಂಬ್ರ 8 ರ ಪರವಾನಿಗೆ ಹೊಂದಿರುವ ಅಧಿಕೃತ ಕೋವಿ ಮದ್ದುಗುಂಡು ವ್ಯಾಪಾರಿಗಳಲ್ಲಿ ಅಥವಾ ಹತ್ತಿರದ ಪೊಲೀಸ್ ಠಾಣೆಗಳಲ್ಲಿ ಠೇವಣಿ ಇಡುವುದು.

| ಕ್ರ.ಸಂ | ವಿವರಗಳು | ಶಸ್ತ್ರಾಸ್ತ್ರವನ್ನು ಠೇವಣಿ ಇರಿಸುವ ಅವಧಿ ಮತ್ತು ಕೊನೆಯ ದಿನಾಂಕ |
|---|---|---|
| 1. | ಮಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿ ಮತ್ತು ಬಂಟ್ವಾಳ ತಾಲೂಕಿನ ಪುದು ಗ್ರಾಮ ಪಂಚಾಯತ್ ವ್ಯಾಪ್ತಿಯನ್ನು ಹೊರತುಪಡಿಸಿ ಉಳಿದಂತೆ ಬಂಟ್ವಾಳ ತಾಲೂಕಿನ ಎಲ್ಲಾ ಗ್ರಾಮ ಪಂಚಾಯತ್ ವ್ಯಾಪ್ತಿಯ ಪರವಾನಿಗೆದಾರರು | ದಿನಾಂಕ 14-12-2020 ರಿಂದ 21-12-2020 ರವರೆಗೆ |
| 2. | ಬೆಳ್ತಂಗಡಿ ತಾಲೂಕಿನ ವೇಣೂರು ಮತ್ತು ಆರಂಬೋಡಿ ಗ್ರಾಮ ಪಂಚಾಯತ್ ವ್ಯಾಪ್ತಿಯನ್ನು ಹೊರತುಪಡಿಸಿ, ಉಳಿದಂತೆ ಬೆಳ್ತಂಗಡಿ, ಸುಳ್ಯ, ಪುತ್ತೂರು, ಸುಳ್ಯ, ಮತ್ತು ಕಡಬ ತಾಲೂಕಿಗೆ ಸಂಬಂಧಪಟ್ಟ ಎಲ್ಲಾ ಪರವಾನಿಗೆದಾರರು | ದಿನಾಂಕ 19-12-2020 ರಿಂದ 26-12-2020 ರವರೆಗೆ |

ಪರವಾನಿಗೆದಾರರಿಗೆ ಬೆಳೆರಕ್ಷಣೆಗಾಗಿ ಶಸ್ತ್ರಾಸ್ತ್ರದ ತೀರಾ ಅವಶ್ಯಕತೆ ಇದೆ ಎಂದಾದಲ್ಲಿ ಮಾತ್ರ ಸಂಬಂಧಪಟ್ಟವರು, ಪೂರಕ ದಾಖಲೆಗಳೊಂದಿಗೆ ಸಂಬಂಧಪಟ್ಟ ತಾಲೂಕು ತಹಶೀಲ್ದಾರರಿಗೆ ಅಹವಾಲುಗಳನ್ನು ಸಲ್ಲಿಸುವುದು. ಹಾಗೂ ಆತ್ಮರಕ್ಷಣೆಗಾಗಿ ಆಯುಧದ ತೀರಾ ಅವಶ್ಯಕತೆ ಇದೆ ಎಂದಾದಲ್ಲಿ ಮಾತ್ರ ಸಂಬಂಧಪಟ್ಟವರು, ಪೂರಕ ದಾಖಲೆಗಳೊಂದಿಗೆ ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ ಇವರಿಗೆ ಅಹವಾಲುಗಳನ್ನು ಸಲ್ಲಿಸುವುದು.ಅರ್ಹ ಪ್ರಕರಣದಲ್ಲಿ ಸಂಬಂಧಪಟ್ಟ ತಾಲೂಕು ತಹಶೀಲ್ದಾರರು ಹಾಗೂ ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ಇವರ ಶಿಫಾರಸ್ಸಿನ ಮೇರೆಗೆ ಆಯುಧ ಠೇವಣಿ ಇಡುವುದರಿಂದ ವಿನಾಯಿತಿ ನೀಡುವ ವಿಚಾರದಲ್ಲಿ ಮುಂದೆ ಪ್ರತ್ಯೇಕ ಆದೇಶ ಹೊರಡಿಸಲಾಗುವುದು.

2. ಅಮಾನತಿನ ಅವಧಿ ಮುಗಿದ ತಕ್ಷಣ ಆಯುಧ ಠೇವಣಿ ಪಡೆದ ಪೊಲೀಸ್ ಅಧಿಕಾರಿಗಳು/ಡೀಲರ್ ಗಳು ಅಂತಹ ಆಯುಧಗಳನ್ನು ಠೇವಣಿದಾರರಿಗೆ **ದಿನಾಂಕ: 06-01-2021** ರ ನಂತರ ಹಿಂತಿರುಗಿಸುವುದು, ಈ ಬಗ್ಗೆ ಪ್ರತ್ಯೇಕ ಆದೇಶವನ್ನು ಹೊರಡಿಸಲಾಗುವುದಿಲ್ಲ.
3. ಈ ಆದೇಶವು ಸರ್ಕಾರಿ ಕರ್ತವ್ಯದಲ್ಲಿ ನಿರತರಾದ ರಕ್ಷಣಾ ಸಿಬ್ಬಂದಿಗಳಿಗೆ, ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಭದ್ರತಾ ಕರ್ತವ್ಯದಲ್ಲಿರುವ ಸಿಬ್ಬಂದಿಗಳಿಗೆ ಅನ್ವಯಿಸುವುದಿಲ್ಲ.

ಈ ಆದೇಶವನ್ನು ದಿನಾಂಕ 02/12/2020 ರಂದು ನನ್ನ ಸ್ವಹಸ್ತ ಸಹಿ ಮತ್ತು ಮುದ್ರೆಯೊಂದಿಗೆ ಹೊರಡಿಸಿದೆ.

(ಡಾ|| ರಾಜೇಂದ್ರ ಕೆ.ವಿ, ಭಾ.ಆ.ಸೇ)
ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ಪ್ರತಿ: ಪೊಲೀಸ್ ಅಧೀಕ್ಷಕರು ದ. ಕ ಜಿಲ್ಲೆ, ಮಂಗಳೂರು- ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ

ಪ್ರತಿ: ಉಪವಿಭಾಗಾಧಿಕಾರಿ ಮಂಗಳೂರು/ ಪುತ್ತೂರು ಇವರಿಗೆ ಮಾಹಿತಿಗಾಗಿ

ಪ್ರತಿ: ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ದ.ಕ.ಮಂಗಳೂರು ಇವರಿಗೆ ವ್ಯಾಪಕ ಪ್ರಚಾರ ನಡೆಸಲು ಸೂಚನೆ ಸಹಿತ.

ಪ್ರತಿ: ಜಿಲ್ಲೆಯ ಎಲ್ಲಾ ತಾಲೂಕು ದಂಡಾಧಿಕಾರಿಯವರಿಗೆ ಮಾಹಿತಿಗಾಗಿ

ಪ್ರತಿ:ಜಿಲ್ಲೆಯ ಎಲ್ಲಾ ಚುನಾವಣಾಧಿಕಾರಿ / ಉಪಚುನಾವಣಾಧಿಕಾರಿಯವರಿಗೆ ಮಾಹಿತಿಗಾಗಿ

ಪ್ರತಿ: ಎನ್.ಐ.ಸಿ ಅಧಿಕಾರಿಯವರಿಗೆ ವೆಬ್ ಸೈಟ್ ನಲ್ಲಿ ಅಳವಡಿಸುವ ಕುರಿತು